ಹೊನ್ನಾವರ ತಾಲ್ಲೂಕಿನಲ್ಲಿ ಕಾರ್ಮಿಕ ನಿರೀಕ್ಷಕರ ಹುದ್ದೆ ಖಾಲಿ ಇರುವುದು.

1535(1935)

ಶ್ರೀ ಜೆ. ಡಿ. ನಾಯಕ್(ಭಟ್ಕಳ): ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಿಟ್ಟು ಉತ್ತರಿಸುವರೆ?

ಅ) ಹೊನ್ನಾವರ ತಾಲ್ಲೂಕಿನಲ್ಲಿ ಕಾರ್ಮಿಕ ಇಲಾಖೆಯಲ್ಲಿ ಕಾರ್ಮಿಕ ನಿರೀಕ್ಷಕರ ಹುದ್ದೆ ಹಲವಾರು ವರ್ಷಗಳಿಂದ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಈ ಹುದ್ದೆಯನ್ನು ಎಂದು ತುಂಬಲಾಗುವುದು?

ಶ್ರೀ ಎ. ಎಂ. ಹಿಂಡಸಗೇರಿ (ಕಾರ್ಮಿಕ ಮತ್ತು ವಕ್ಫ್ ಸಚಿವರು):

ಅ) ಹೌದು.

ಆ) 24 ಖಾಲಿ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಅಧಿಸೂಚಿಸಲಾಗಿದೆ. ಅಭ್ಯರ್ಥಿಗಳು ಬಂದ ಕೂಡಲೇ ತುಂಬಲಾಗುವುದು.

ತರೀಕೆರೆ ತಾಲ್ಲೂಕಿನಲ್ಲಿ ರಸ್ತೆಗಳ ಅಭಿವೃದ್ಧಿ.

1536(೧೮೯೧)

ಶ್ರೀ ನೀಲಕಂಠಪ್ಪ ಬಿ. ಆರ್.(ತರೀಕೆರೆ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಿಟ್ಟು ಉತ್ತರಿಸುವರೆ?

1. ಲೋಕೋಪಯೋಗಿ ಇಲಾಖೆಯ ಎಂ. ಆರ್. ಯೋಜನೆಯಡಿ ತರೀಕೆರೆ ತಾಲ್ಲೂಕಿನಲ್ಲಿ ಎಷ್ಟು ಕಿಲೋ ಮೀಟರ್ ಉದ್ದದ ರಸ್ತೆಗಳನ್ನು ಕಳೆದ ಒಂದು ವರ್ಷದಲ್ಲಿ ದುರಸ್ತಿ ಮಾಡಲಾಗಿದೆ; ಈ ಕಾಮಗಾರಿಗೆ ಮಾಡಿದ ವೆಚ್ಚವೆಷ್ಟು?

2. ತರೀಕೆರೆ ತಾಲ್ಲೂಕಿನ ಲೋಕೋಪಯೋಗಿ ಇಲಾಖೆಯ ಅಭಿಯಂತರರುಗಳು ಅಧಿಕಾರ ದುರುಪಯೋಗ ಮಾಡಿದ ಬಗ್ಗೆ ಶಿಸ್ತು ವಿಚಾರಣೆಯ ಪ್ರಕರಣಗಳು ಯಾವ ಹಂತದಲ್ಲಿವೆ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):